# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 1999 (2357)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಬ್ಯಾಂಕ್‌ಗಳಲ್ಲಿ ಗ್ರಾಹಕರೊಂದಿಗೆ ಕನ್ನಡದಲ್ಲಿ ವ್ಯವಹರಿಸುವ ಬಗ್ಗೆ

(ಅ) ಕೇಂದ್ರ ಭಾಷಾ ನೀತಿಯನ್ವಯ ರಾಜ್ಯದಲ್ಲಿನ ಎಲ್ಲಾ ಬ್ಯಾಂಕುಗಳು ಗ್ರಾಹಕರೊಂದಿಗೆ ಕನ್ನಡದಲ್ಲಿಯೇ ವ್ಯವಹರಿಸಬೇಕೆಂಬ ನಿಯಮವಿದ್ದರೂ ಬ್ಯಾಂಕುಗಳ ಸೇವೆಗಳಲ್ಲಿ ಕನ್ನಡ ಅವಗಣನೆಯಾಗುತ್ತಿರುವ ವರದಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ;

(ಆ) ರಾಜ್ಯ ಬ್ಯಾಂಕರುಗಳ ಸಮಿತಿ ಸಭೆಯಲ್ಲಿ ಬ್ಯಾಂಕುಗಳಲ್ಲಿ ಕನ್ನಡ ಬಳಕೆಯ ಬಗ್ಗೆ ಪ್ರಸ್ತಾಪವಾಗುತ್ತಿದ್ದರೂ ಅನುಷ್ಠಾನದ ಕೊರತೆಯಾಗುವುದಕ್ಕೆ ಕಾರಣವೇನು ;

(ಇ) ರಾಜ್ಯದಲ್ಲಿ ಎಲ್ಲಾ ಬ್ಯಾಂಕುಗಳಲ್ಲಿ ಅರ್ಜಿ ನಮೂನೆಗಳು ಕನ್ನಡದಲ್ಲಿ ಇರಬೇಕೆಂಬ ನಿಯಮ ಕಡ್ಡಾಯವಾಗಿ ಪಾಲಿಸುವಂತೆ ಸರ್ಕಾರ ಬ್ಯಾಂಕುಗಳಿಗೆ ಸೂಚಿಸಲು ಇರುವ ತೊಂದರೆಗಳೇನು ;

(ಈ) ಬ್ಯಾಂಕ್ ನೇಮಕಾತಿ ಗಳಲ್ಲಿ ಕನ್ನಡಿಗರಿಗೆ ಆದ್ಯತೆ ನೀಡುವ ಬಗ್ಗೆ ನಿಯಮ ಜಾರಿಗೆ ತರುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಉ) ರಾಜ್ಯದ ಎಲ್ಲಾ ಬ್ಯಾಂಕುಗಳ ಎಟಿಎಂ ಗಳಲ್ಲಿ ಕನ್ನಡ ಭಾಷಾ ಸೌಲಭ್ಯ ಅಳವಡಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?